# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/17/2020-21 ದಿನಾಂಕ: 19/06/2021.

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 19/06/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ Deter Committe ಹಾಗೂ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀಮತಿ. ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
2. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
3. ಶ್ರೀ ಮಂಜುನಾಥ್, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ನಾಗಪ್ಪ, ಕಂದಾಯ ವಸೂಲಿಗಾರರು
5. ಶ್ರೀ ಸುರೇಶ್ ಈ.ಎಸ್, ಬಿಬಿಎಂಪಿ ಮಾರ್ಷಲ್
6. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
7. ಶ್ರೀ ಎಂ ಶ್ರೀನಿವಾಸ್, ಸದಸ್ಯರು

**ಸಹಾಯಕ ಅಭಿಯಂತರರು :-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-**

- ವಾರ್ಡ್ ವ್ಯಾಪ್ತಿಯಲ್ಲಿ ಪಾಸಿಟಿವ್ ಕೇಸ್ ದಿನೇದಿನೇ ಕಡಿಮೆಯಾಗುತ್ತಿದ್ದು, ಸಾರ್ವಜನಿರಕು ಇದೇ ರೀತಿ ಸರ್ಕಾರದ ಮಾರ್ಗಸೂಚಿಗಳನ್ನು ಅನುಸರಿಸಲು ತಿಳಿಸಿದರು. ಮತ್ತು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು, ಆಗಾಗ ಕೈತೊಳೆಯಬೇಕು ಹಾಗೂ 6 ಅಡಿ ಅಂತರ ಕಾಪಾಡುವುದು ಅವಶ್ಯಕವಾಗಿರುತ್ತದೆ ಮತ್ತು ಅವಶ್ಯ ಸಂದರ್ಭದಲ್ಲಿ ಮಾತ್ರ ಮನೆಯಿಂದ ಹೊರಗೆ ಬರಬೇಕೆಂದು ತಿಳಿಸಿರುತ್ತಾರೆ. ಎಂದು ಸಭೆಗೆ ತಿಳಿಸಿದರು.
- ದೊಡ್ಡಬೊಮ್ಮಸಂದ್ರ ಸರ್ಕಾರಿ ಶಾಲೆಯಲ್ಲಿ, ರಾಮಚಂದ್ರ ಸರ್ಕಾರಿ ಶಾಲೆಯಲ್ಲಿ ಹಾಗೂ ತಿಂಡ್ಲು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವ್ಯಾಕ್ಸಿನ್ ಕೇಂದ್ರ ಸ್ಥಾಪಿಸಲಾಗಿದ್ದು, ಸರ್ಕಾರದ ನಿರ್ದೇಶನದಂತೆ 18 ವರ್ಷಕ್ಕಿಂತ ಮೇಲ್ಪಟ್ಟ ಎಲ್ಲರು ವ್ಯಾಕ್ಸಿನ್ ಹಾಕಿಸಿಕೊಳ್ಳಬೇಕಾಗಿ ಕೋರಿದರು. ಹಾಗೂ ಲಿಸಿಕೆ ನೀಡುವ ಕೇಂದ್ರಗಳ ಮಾಹಿತಿಯನ್ನು ಪ್ರತಿನಿತ್ಯ ವಾಟ್ಸಪ್ ಗ್ರೂಪ್‌ಗಳಲ್ಲಿ ತಿಳಿಸಲಾಗುತ್ತಿರುತ್ತದೆ.
- ಸಾರ್ವಜನಿಕರು ವ್ಯಾಕ್ಸಿನ್ ಪಡೆಯಲು ಜಾಗ್ರತಿ ಮೂಡಿಸಲು ಆಟೋ ಮುಖಾಂತರ ಪ್ರಚಾರ ಮಾಡಲು ಕ್ರಮವಹಿಸಲಾಗಿದೆ.

**ಸದಸ್ಯರುಗಳು ಹಾಗೂ ಸಾರ್ವಜನಿಕರು:-** ವಾರ್ಡ್ ನಂ 10 ರ ವ್ಯಾಪ್ತಿಯಲ್ಲಿ ಕೋವಿಡ್ ಸಲಿಕೆ ಹಾಗೂ ಕೋವಿಡ್ ಟೆಸ್ಟಿಂಗ್ ಟೀಮ್‌ಗಳು ತುಂಬಾ ಚೆನ್ನಾಗಿ ಕೆಲಸ ನಿರ್ವಹಿಸುತ್ತಿರುವುದಾಗಿ ತಿಳಿಸಿ ವೈದ್ಯರನ್ನು ಹಾಗೂ ಸಿಬ್ಬಂಧಿಯರನ್ನು ಶ್ಲಾಘಿಸಿರುತ್ತಾರೆ.

ಬೈರಪ್ಪ ಲೇಔಟ್‌ನಲ್ಲಿ ಬ್ಲಾಕ್ ಸ್ಪಾಟ್‌ಗಳಿದ್ದು, ಸದರಿ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲು ಕೋರಿದ್ದು, ಅದರಂತೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಕೂಡಲೇ ತೆರವುಗೊಳಿಸಲು ಕ್ರಮಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

ವಾರ್ಡಿನ ವ್ಯಾಪ್ತಿಯಲ್ಲಿ ಬಿದಿ ದೀಪಗಳು ಹಾಳಾಗಿದ್ದು, ಅವುಗಳನ್ನು ರಿಪೇರಿ ಮಾಡಲು ಕೋರಿರುತ್ತಾರೆ. ಪಾಲಿಕೆಯ ವಿದ್ಯುತ್ ವಿಭಾಗದ ಅಭಿಯಂತರರಿಗೆ ತಿಳಿಸಿ ಕ್ರಮಕೈಗೊಳ್ಳಲಾಗುವುದೆಂದು ಸಭೆಯಲ್ಲಿ ಸಾರ್ವಜನಿಕರಿಗೆ ತಿಳಿಸಲಾಗಿರುತ್ತದೆ.

ರಾಮಚಂದ್ರಪುರದ ಶಾಲೆಯ ಬಳಿ ಮತ್ತು ಪಾರ್ಕ್ ಬಳಿ ಗಾಂಜಾ ಸೇವನೆ ಮಾಡುವುದು ಹೆಚ್ಚಾಗಿದ್ದು ಸದರಿಯವರ ಮೇಲೆ ಕ್ರಮಕೈಗೊಳ್ಳಲು ಆರಕ್ಷಕರಿಗೆ ತಿಳಿಸಲು ಕೋರಿರುತ್ತಾರೆ. ಸ್ಥಳಿಯ ಆರಕ್ಷಕ ಠಾಣೆಗೆ ಮಾಹಿತಿ ನೀಡಿ ಕ್ರಮಕೈಗೊಳ್ಳಲು ಕೋರಲಾಗುವುದು ಎಂದು ಸಭೆಯಲ್ಲಿ ಸಾರ್ವಜನಿಕರಿಗೆ ತಿಳಿಸಲಾಗಿರುತ್ತದೆ.

ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

"ಸಹಿ/-" Suetha. N.K

ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
8. ಕಛೇರಿ ಕಡತಕ್ಕೆ.